ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1163
ಸದಸ್ಯರ ಹೆಸರು	ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	17.03.2020
ಉತ್ತರಿಸುವ ಸಚಿವರು	ಗಣಿ ಮತ್ತು ಭೂವಿಜ್ಞಾನ ಸಚಿವರು

ಕ್ರ ಸಂ.	ಪ್ರಶ್ನೆಗಳು	ಉತ್ತರ
ಅ.	ಸಮಗ್ರ ಮರಳು ನೀತಿ ಜಾರಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ವಿವರ ನೀಡುವುದು;	ಕಟ್ಟಡ ಹಾಗೂ ಇತರೆ ನಿರ್ಮಾಣ ಕಾಮಗಾರಿಗಳಿಗೆ ಕೈಗೆಟಕುವ ದರದಲ್ಲಿ ಮತ್ತು ನಿಯಮಿತವಾಗಿ ಮರಳು ದೊರಕುವಂತೆ ಮಾಡಲು ರಾಜ್ಯದಲ್ಲಿ ಹೊಸ ಮರಳು ನೀತಿ ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಮುಂದಿರುತ್ತದೆ.
ಆ.	ಮರಳು ನೀತಿ ಜಾರಿಗೊಳಿಸಲು ಸರ್ಕಾರಕ್ಕೆ ಇರುವ ಮಾನದಂಡಗಳೇನು; (ಸಂಪೂರ್ಣ ವಿವರಗಳ ಮಾಹಿತಿ ನೀಡುವುದು)	ಸರ್ಕಾರಿ ಮತ್ತು ಸಾರ್ವಜನಿಕ ನಿರ್ಮಾಣ ಕಾಮಗಾರಿಗಳಿಗೆ ನಿಯಮಿತವಾಗಿ ಮತ್ತು ಸುಲಭವಾಗಿ ಕೈಗೆಟಕುವ ದರದಲ್ಲಿ ಮರಳು ದೊರೆಯುವಂತೆ ಮತ್ತು ಪರಿಸರಕ್ಕೆ ಧಕ್ಕೆಯಾಗದಂತೆ, ವೈಜ್ಞಾನಿಕವಾಗಿ ಮರಳು ಗಣಿಗಾರಿಕೆ ನಡೆಸುವುದು ಹೊಸ ಮರಳು ನೀತಿಯ ಮುಖ್ಯ ಮಾನದಂಡವಾಗಿರುತ್ತದೆ.
ಇ.	ಮರಳು ನೀತಿ ಜಾರಿಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು)	ರಾಜ್ಯ ಸಚಿವ ಸಂಪುಟದ ಉಪ ಸಮಿತಿಯ ಸಭೆಗಳ ನಡವಳಿಯಂತೆ ಮತ್ತು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ 13.12.2019 ಮತ್ತು 11.02.2020 ರಂದು ನಡೆದ ಅಧಿಕಾರಿಗಳ ಸಭೆಯಲ್ಲಿ ಚರ್ಚಿಸಿದಂತೆ ಹಾಗೂ ಗಣಿ ಮತ್ತು ಭೂವಿಜ್ಞಾನ ಸಚಿವರ ಅಧ್ಯಕ್ಷತೆಯಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ನಡೆದ ಸಭೆಗಳಲ್ಲಿ ಚರ್ಚಿಸಿ, ಹೊಸ ಮರಳು ನೀತಿ ಜಾರಿಗೆ ತರಲು ಕ್ರಮ ವಹಿಸಲಾಗುತ್ತಿದೆ.

ಸಂಖ್ಯೆ: ಸಿಐ 151 ಎಂಎಂಎನ್ 2020

(ಸಿ.ಸಿ. ಪಾಟೀಲ)

ಗಣಿ ಮತ್ತು ಭೂವಿಜ್ಞಾನ ಸಚಿವರು